ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಎತ್ತಿನ ಹೊಳೆ ಜಲಾಶಯದಿಂದ ಬಯಲು ಸೀಮೆಗೆ ಕುಡಿಯುವ ನೀರು ಒದಗಿಸುವ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

1216 (1516) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಬಯಲು ಸೀಮೆಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ ಎತ್ತಿನ ಹೊಳೆಯ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಗಿದೆ ;

(ಆ) ಈ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸುವಾಗ ನಿಗಧಿ ಮಾಡಿದ್ದ ಯೋಜನಾ ವೆಚ್ಚವೆಷ್ಟು ; ತದನಂತರ ಏರಿಕೆ ಮಾಡಿರುವ ಕಾಮಗಾರಿಯ ವೆಚ್ಚವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇಲ್ಲಿಯ ತನಕ ಕಾಮಗಾರಿಗಳು ಯಾವ ಯಾವ ಹಂತದಲ್ಲಿ ನಡೆಯುತ್ತಿವೆ ; ಹಾಗು ಎಷ್ಟು ಹಣವನ್ನು ಈ ಕಾಮಗಾರಿಗಳಗೆ ಖರ್ಚು ಮಾಡಲಾಗಿದೆ ; (ಅಂಕಿ ಅಂಶಗಳೊಂದಿಗೆ ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಬೈರಗೊಂಡ್ಲು ಬಳಿ ರೂ. 700 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡುತ್ತಿರುವ ಜಲಾಶಯದ ಯೋಜನೆಯು ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ಎತ್ತಿನ ಹೊಳೆ ಯೋಜನೆಯ ಕಾಮಗಾರಿಯನ್ನು ಸಂಪೂರ್ಣವಾಗಿ ಯಾವಾಗ ಪೂರ್ಣಗೊಳಿಸಲಾಗುವುದು ?